ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

BMRCL ನಲ್ಲಿ ಗುತ್ತಿಗೆ ನೌಕರರ ನೇಮಕಾತಿ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-

1266 (1546) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ (BMRCL) ದಲ್ಲಿ ಹಾಲಿ ಗುತ್ತಿಗೆಯಡಿ ಕೆಲಸ ನಿರ್ವಹಿಸುತ್ತಿರುವ ಉದ್ಯೋಗಿಗಳು ಎಷ್ಟು; ಉದ್ಯೋಗಿ ಹೆಸರು, ಹುದ್ದೆ, ಮಾಸಿಕ ಪಡೆಯುತ್ತಿರುವ ವೇತನ ಸೇವೆಗೆ ಸೇರಿದ ದಿನಾಂಕದೊಂದಿಗೆ ವಿವರವಾದ ಮಾಹಿತಿ ನೀಡುವುದು ;

(ಆ) ಸದರಿ ನೌಕರರಲ್ಲಿ ಕರ್ನಾಟಕದವರೆಷ್ಟು ; ಅನ್ಯ ರಾಜ್ಯದವರೆಷ್ಟು; (ಹೆಸರು, ವಿಳಾಸದೊಂದಿಗೆ ಮಾಹಿತಿ ಕೊಡುವುದು)

(ಇ) ಮೆಟ್ರೋ ನಿಗಮಕ್ಕೆ ಸಾವಿರಾರು ಗುತ್ತಿಗೆ ನೌಕರರನ್ನು ಯಾವ ಮಾನದಂಡದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ; ದಿನಪತ್ರಿಕೆಯಲ್ಲಿ ಜಾಹೀರಾತು ನೀಡಿ ನೇಮಕ ಮಾಡಿಕೊಳ್ಳಲಾ ಗಿದೆಯೇ; (ವಿವರ ನೀಡುವುದು)

(ಈ) ಜನಪ್ರತಿನಿಧಿಗಳು ಶಿಫಾರಸ್ಸು ಮಾಡಿದ ಯಾವ ಅಭ್ಯರ್ಥಿಗಳಿಗೂ ಕೆಲಸ ನೀಡದೆ ಅಧಿಕಾರಿಗಳೂ ತಮ್ಮ ಮನಸ್ಸಿಗೆ ಬಂದಂತೆ ಗುತ್ತಿಗೆ ನೌಕರರನ್ನು ನೇಮಕಾತಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನೇಮಕಗೊಂಡ ಗುತ್ತಿಗೆ ನೌಕರರಲ್ಲಿ ಜನಪ್ರತಿನಿಧಿಗಳು ಶಿಫಾರಸ್ಸು ಮಾಡಿದವರ ಸಂಖ್ಯೆ ಎಷ್ಟು ; ಅಧಿಕಾರಿಗಳು ನೇರವಾಗಿ ನೇಮಕ ಮಾಡಿಕೊಂಡವರೆಷ್ಟು; (ವಿವರವಾಗಿ ಮಾಹಿತಿ ನೀಡುವುದು)

(ಉ) ಕನ್ನಡಿಗ ಅಭ್ಯರ್ಥಿಗಳಿಗೆ ಅನ್ಯಾಯ ಮಾಡಿದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?